ವಕೀಲರ ಸಂಘದಲ್ಲಿ ಅನುದಾನ ದುರ್ಬಳಕೆಯಾಗಿರುವುದು

470(317); ಶ್ರೀ ಕೆ.ಬಿ. ಕೋಳಿವಾಡ (ರಾಣೇಬೆನ್ನೂರು)

ಅ) ರಾಣೇಬೆನ್ನೂರು ವಕೀಲರ ಸಂಘದಲ್ಲಿ ಸರ್ಕಾರದ ಅನುದಾನ ದುರ್ಬಳಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು)

ಅ) ಬಂದಿದೆ.

ಆ) ಈ ಕುರಿತು ಅಡ್ವೊಕೇಟ್ ಜನರಲ್ ರವರಿಂದ ವರದಿ ಬಂದಿದ್ದು, ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಪಶುವೈದ್ಯಾಧಿಕಾರಿಗಳ ಕೊರತೆ

473(714); ಶ್ರೀ ಕೋನರೆಡ್ಡಿ ಎನ್. ಎಚ್. (ನವಲಗುಂದ)

ಅ) ರಾಜ್ಯದಲ್ಲಿ ಪಶುವೈದ್ಯಾಧಿಕಾರಿಗಳ ಕೊರತೆಯಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಎಷ್ಟು ಪಶುವೈದ್ಯಾಧಿಕಾರಿಗಳ ಕೊರತೆ ಇದೆ;

ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು;

ಈ) ರಾಜ್ಯದಲ್ಲಿ ಹೊಸ ಪಶುಚಿಕಿತ್ಸಾಲಯ ಪ್ರಾರಂಭಿಸಲು ಸರ್ಕಾರ ಕ್ರಮ ಜರುಗಿಸುವುದೇ;

ಉ) ರಾಜ್ಯದಲ್ಲಿರುವ ಪಶುಚಿಕಿತ್ಸಾಲಯಗಳಿಗೆ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ;